- ❖ ಶಿಫಾರಸ್ಸು ಮಾಡಿದ ಸಾರಜನಕ ಮತ್ತು ರಂಜಕಯುಕ್ತ ಗೊಬ್ಬರಗಳಲ್ಲಿ ಶೇ. 25 ರಷ್ಟು ಪ್ರಮಾಣವನ್ನು ಕಡಿಮೆ ಮಾಡುತ್ತದೆ.
- ❖ ವಿವಿಧ ಬೆಳೆಗಳಲ್ಲಿ ಶೇ. 10 ರಿಂದ 17 ರಷ್ಟು ಹೆಚ್ಚಿನ ಇಳುವರಿಯನ್ನು ಪಡೆಯಬಹುದು.

### ಬಳಸುವ ವಿಧಾನ

- ❖ **ಬೀಜೋಪಚಾರ:** 200 ಗ್ರಾಂ ಬೀಜಗಳನ್ನು ಉಪಚರಿಸಲು 20 ಗ್ರಾಂ ಅರ್ಕಾ ಸೂಕ್ಷ್ಮಾಣು ಜೀವಿಗಳ ಸಮೂಹವನ್ನು 30 ಮಿ. ಲೀ. ಬೆಲ್ಲದ ಪಾಕದ ನೀರಿನಲ್ಲಿ ಬೆರೆಸಿ, ಬೀಜದೊಡನೆ ಚೆನ್ನಾಗಿ ಮಿಶ್ರಣ ಮಾಡಿ, ಅರ್ಧ ಘಂಟೆಗಳ ಕಾಲ ನೆರಳಿನಲ್ಲಿ ಒಣಗಿಸಿ ಅದೇ ದಿನದಲ್ಲಿ ಬಿತ್ತನೆ ಮಾಡಬೇಕು.
- ❖ **ಕೊಟ್ಟಿಗೆ ಗೊಬ್ಬರಕ್ಕೆ ಸೇರಿಸುವ ವಿಧಾನ:** 5 ಕೆ.ಜಿ. ಅರ್ಕಾ ಸೂಕ್ಷ್ಮಾಣು ಜೀವಿಗಳ ಸಮೂಹವನ್ನು 500 ಕೆ.ಜಿ. ಕೊಟ್ಟಿಗೆ ಗೊಬ್ಬರದೊಡನೆ ಚೆನ್ನಾಗಿ ಮಿಶ್ರಣ ಮಾಡಿ ಬೆಳೆಗಳಿಗೆ ಉಪಯೋಗಿಸಬೇಕು.
- ❖ **ಬೆಳೆಗಳಿಗೆ ನೇರವಾಗಿ ಉಪಯೋಗಿಸುವ ವಿಧಾನ:** 4 ಕೆ.ಜಿ. ಅರ್ಕಾ ಸೂಕ್ಷ್ಮಾಣು ಜೀವಿಗಳ ಸಮೂಹ ಮತ್ತು ಅರ್ಧ ಕೆ. ಜಿ. ಬೆಲ್ಲವನ್ನು 200 ಲೀಟರ್ ನೀರಿನಲ್ಲಿ ಮಿಶ್ರಣ ಮಾಡಿ ಗಿಡದ ಬುಡಕ್ಕೆ ನೇರವಾಗಿ (4 ರಿಂದ 5 ಲೀಟರ್‌ನಷ್ಟು) ಸುರಿಯಬೇಕು ಅಥವಾ ಶೋಧಿಸಿದ ನಂತರ ಹನಿ ನೀರಾವರಿ ಮೂಲಕ ಕೊಡುವುದು.

**ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ**
**ಬೀದರ**

**ಭಾ.ಕೃ.ಸಂ.ಪ. – ಕೃಷಿ ವಿಜ್ಞಾನ ಕೇಂದ್ರ, ದ.ಕ.**
**ಕಂಕನಾಡಿ, ಮಂಗಳೂರು – 575 002**

# ಸುಸ್ಥಿರ ಇಳುವರಿಗಾಗಿ ಜೈವಿಕ ಗೊಬ್ಬರ: ಅರ್ಕಾ ಸೂಕ್ಷ್ಮಾಣು ಜೀವಿಗಳ ಸಮೂಹ

**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:**
**ಭಾ. ಕೃ. ಅ. ಪ. – ಕೃಷಿ ವಿಜ್ಞಾನ ಕೇಂದ್ರ**
**ಮೀನುಗಾರಿಕಾ ಕಾಲೇಜು ಆವರಣ, ಎಕ್ಕೂರು,**
**ಕಂಕನಾಡಿ ಅಂಚೆ, ಮಂಗಳೂರು,**
**ದಕ್ಷಿಣ ಕನ್ನಡ – 575002**
www.kvkdk.org, kvkdk@rediffmail.com
0824–2431872

ಕೃಷಿ ಪದ್ಧತಿಯನ್ನು ಸುಸ್ಥಿರವಾಗಿರಿಸಲು ರಾಸಾಯನಿಕ ಗೊಬ್ಬರಗಳ ಬಳಕೆ ಮತ್ತು ಅವುಗಳ ಮೇಲಿನ ದೀರ್ಘ ಕಾಲದ ಅವಲಂಬನೆಯಿಂದ ಅಸಾಧ್ಯ. ಸಮಗ್ರ ಪೋಷಕಾಂಶಗಳ ಬಳಕೆಯಿಂದ ಕೃಷಿಯು ಇಳುವರಿಯನ್ನು ಸುಸ್ಥಿರ ಗೊಳಿಸಬಹುದು. ಮಣ್ಣಿನ ಆರೋಗ್ಯವನ್ನು ಕಾಪಾಡುವಲ್ಲಿ ಹಸಿರು ಎಲೆ ಗೊಬ್ಬರ, ಜೈವಿಕ ಮತ್ತು ಸಾವಯವ ಗೊಬ್ಬರಗಳು ಪ್ರಮುಖ ಪಾತ್ರವನ್ನು ವಹಿಸುತ್ತವೆ. ಕೃಷಿ ಮತ್ತು ತೋಟಗಾರಿಕಾ ಬೆಳೆಗಳಲ್ಲಿ ರಾಸಾಯನಿಕ ಗೊಬ್ಬರಗಳ ಹಾಗೂ ಪೀಡೆನಾಶಕಗಳ ದುರ್ಬಳಕೆಯಿಂದ ಮಣ್ಣಿನ ಭೌತಿಕ, ರಾಸಾಯನಿಕ ಮತ್ತು ಜೈವಿಕ ಗುಣಧರ್ಮಗಳಲ್ಲಿ ತೀವ್ರಗತಿಯ ಅಡ್ಡಪರಿಣಾಮವಾಗುತ್ತಿದ್ದು, ಮಣ್ಣಿನ ಫಲವತ್ತತೆ ಮತ್ತು ಪೋಷಕಾಂಶಗಳನ್ನು ಒದಗಿಸುವ ಶಕ್ತಿ ಕುಂದುತ್ತಿದೆ ಹಾಗೂ ಬೆಳೆಗಳ ಉತ್ಪಾದನೆ ಮತ್ತು ಉತ್ಪಾದಕತೆ ಗಣನೀಯ ಪ್ರಮಾಣದಲ್ಲಿ ಕಡಿಮೆಯಾಗುತ್ತಿದೆ.

ಈ ಸೂಕ್ಷ್ಮಾಣು ಜೀವಿಗಳು ಸಸ್ಯ ಬೆಳವಣಿಗೆಗೆ ಬೇಕಾದ ಪೋಷಕಾಂಶಗಳು, ಬೆಳವಣಿಗೆಕಾರಕಗಳಾದ ಬೆಳೆ ಪ್ರಚೋದಕ ವಸ್ತುಗಳು ಹಾಗೂ ಜೀವಸತ್ವಗಳನ್ನು ಗಿಡದ ಬೆಳವಣಿಗೆಗೆ ಒದಗಿಸುತ್ತವೆ. ಸಸ್ಯ ರೋಗಗಳನ್ನು ಉಂಟುಮಾಡುವ ಸೂಕ್ಷ್ಮಾಣುಜೀವಿಗಳನ್ನು ತಡೆಗಟ್ಟುವಲ್ಲಿ ಫಲಪ್ರದವಾಗಿ ಕೆಲಸಮಾಡುತ್ತವೆ.

ಈ ಸೂಕ್ಷ್ಮಾಣು ಜೀವಿಯನ್ನು ಎಲ್ಲಾ ಬೆಳೆಯಲ್ಲಿ ಬಳಸಬಹುದಾಗಿದ್ದು, ಇದರ ಬಳಕೆಯಿಂದ ಸಸ್ಯವು ಸಮೃದ್ಧಿಯಾಗಿ ಬೆಳೆಯುವುದಲ್ಲದೆ ಉತ್ತಮ ಫಸಲನ್ನು ಪಡೆಯಬಹುದು. ಜೈವಿಕ ಗೊಬ್ಬರಗಳು ಸೂಕ್ಷ್ಮಾಣುಜೀವಿಗಳಿಂದ ತಯಾರಿಸಲ್ಪಡುತ್ತವೆ. ಇವು ಸಾರಜನಕ, ರಂಜಕ, ಪೊಟ್ಯಾಷ್ ಮತ್ತು ಲಘು ಪೋಷಕಾಂಶಗಳನ್ನು ಗಿಡಕ್ಕೆ ಒದಗಿಸುವಲ್ಲಿ ಸಹಾಯಕವಾಗಿದೆ.

ಜೈವಿಕ ಗೊಬ್ಬರಗಳು ಸಾರಜನಕವನ್ನು ಸ್ಥಿರೀಕರಿಸುವ, ರಂಜಕ ಮತ್ತು ಸತುವನ್ನು ಕರಗಿಸುವ ಗುಣ ವಿಶೇಷತೆಯಿಂದ ಪ್ರಾಮುಖ್ಯತೆಯನ್ನು ಪಡೆದಿರುತ್ತದೆ. ಪ್ರಸ್ತುತ ಜೈವಿಕ ಗೊಬ್ಬರಗಳ ಬಳಕೆ ಬಗ್ಗೆ ಸರಿಯಾದ ಮಾಹಿತಿಯಿಲ್ಲದಿರುವುದರಿಂದ, ಬಳಕೆ ಕಡಿಮೆ ಯಾಗಿರುತ್ತದೆ. ಈ ಕೊರತೆಯನ್ನು ನೀಗಿಸಲು ಮತ್ತು ಒಂದೇ ರೀತಿಯ ಜೈವಿಕ ಗೊಬ್ಬರಗಳ ಬಳಕೆಯಿಂದ ಉಂಟಾಗುವ ಅಧಿಕ ಖರ್ಚು ಮತ್ತು ಕಡಿಮೆ ಕಾರ್ಯ ಕ್ಷಮತೆಯ ನ್ಯೂನತೆಯನ್ನು ಹೋಗಲಾಡಿಸಲು ಐ. ಸಿ. ಎ. ಆರ್. – ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ, ಬೆಂಗಳೂರು ಇವರು ಜೈವಿಕ ಗೊಬ್ಬರವಾದ ಅರ್ಕಾ ಸೂಕ್ಷ್ಮಾಣು ಜೀವಿಗಳ ಸಮೂಹವನ್ನು ಉತ್ಕೃಷ್ಟ ತಂತ್ರಜ್ಞಾನದೊಂದಿಗೆ ಅಭಿವೃದ್ಧಿಪಡಿಸಿರುತ್ತದೆ.

**ಅರ್ಕಾ ಸೂಕ್ಷ್ಮಾಣು ಜೀವಿಗಳ ಸಮೂಹದ ಉಪಯೋಗಗಳು**

- ಸಾರಜನಕವನ್ನು ಸ್ಥಿರೀಕರಿಸುವ, ರಂಜಕ ಮತ್ತು ಸತುವನ್ನು ಕರಗಿಸುವ ಹಾಗೂ ಸಸ್ಯ ಬೆಳವಣಿಗೆಯನ್ನು ಪ್ರಚೋದಿಸುವ (ಅಜಟೋಬ್ಯಾಕ್ಟರ್ ಟ್ರೋಪಿಕಾಲಸ್, ಬೆಸಿಲ್ಲಸ್ ಆರ್ಯಭಟ ಮತ್ತು ಸುಡೋಮೋನಾಸ್ ಥಾಯ್ವಾನೆನ್ಸಿಸ್) ಕಾರ್ಯಕ್ಷಮತೆಯನ್ನು ಹೊಂದಿರುತ್ತದೆ.
- ಅರ್ಕಾ ಸೂಕ್ಷ್ಮಾಣು ಜೀವಿಗಳ ಸಮೂಹದ ಬಳಕೆಯಿಂದ ಸಸ್ಯದ ಬೆಳವಣಿಗೆ ಮತ್ತು ಇಳುವರಿ ಅಧಿಕಗೊಳ್ಳುತ್ತದೆ.
- ಜೈವಿಕ ಗೊಬ್ಬರವನ್ನು ಬೀಜೋಪಚಾರ ಮಾಡಿ, ಮಣ್ಣು, ಕೊಟ್ಟಿಗೆ ಗೊಬ್ಬರ ಮತ್ತು ತೆಂಗಿನ ನಾರಿಗೆ ಸೇರಿಸಿ ಸುಲಭವಾಗಿ ಬಳಸಬಹುದು.
- ಸಾರಜನಕವನ್ನು ಸ್ಥಿರೀಕರಿಸುವ, ರಂಜಕ ಮತ್ತು ಸತುವನ್ನು ಕರಗಿಸುವ ಹಾಗೂ ಸಸ್ಯ ಬೆಳವಣಿಗೆಯನ್ನು ಪ್ರಚೋದಿಸುವ ಸೂಕ್ಷ್ಮಾಣು ಜೀವಿಗಳನ್ನು ಬೇರೆ ಬೇರೆಯಾಗಿ ಹಾಕುವ ಅವಶ್ಯಕತೆಯಿಲ್ಲದೆ ರೈತರು ವಿವಿಧ ಬೆಳೆಗಳಿಗೆ ಬಳಸಬಹುದು.
- ಬೀಜವು ಬೇಗ ಮೊಳಕೆಯೊಡೆಯುವಂತೆ ಮಾಡಿ ಸಸ್ಯದ ಬೆಳವಣಿಗೆ ಮತ್ತು ದೃಢತೆಯನ್ನು ಹೆಚ್ಚಿಸುತ್ತದೆ.